**Akashvani : Bangalore**
**National Bulletin In Kannada**
**22.03.2024 / 19.35 hrs**
**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**22.03.2024 / 19.35 hrs**

**<><*<><>*><>**

**ಮುಖ್ಯಾಂಶಗಳು**

೧. **ಮುಕ್ತ ಹಾಗೂ ನ್ಯಾಯಸಮ್ಮತ ಲೋಕಸಭಾ ಚುನಾವಣೆಗಾಗಿ ಆಯೋಗದಿಂದ ೨ ಸಾವಿರದ ೧೦೦ ವೀಕ್ಷಕರ ನಿಯೋಜನೆ.**

೨. **ದೆಹಲಿ ಮುಖ್ಯಮಂತ್ರಿ ಬಂಧನ; ಚುನಾವಣಾ ಆಯೋಗ ಮಧ್ಯಪ್ರವೇಶಕ್ಕೆ ಪ್ರತಿಪಕ್ಷಗಳ ನಿಯೋಗ ಮನವಿ**

೩. **ವಿಶ್ವ ಜಲ ದಿನ ಇಂದು ಆಚರಣೆ**

೪. **ಐಪಿಎಲ್ ಟಿ-೨೦ ಕ್ರಿಕೆಟ್: ರಾಯಲ್ ಚಾಲೆಂಜರ್ಸ್ ಬೆಂಗಳೂರು - ಚೆನ್ನೈಸೂಪರ್ ಕಿಂಗ್ಸ್ ಇಂದು ಮುಖಾಮುಖಿ**

**<><*<><>*><>**

೨೦೨೪ರ ಸಾರ್ವತ್ರಿಕ ಚುನಾವಣೆಗೆ ಭಾರತ ಚುನಾವಣಾ ಆಯೋಗ ಸಜ್ಜಾಗಿದೆ. ೧೮ನೇ ಲೋಕಸಭೆಗೆ ಸದಸ್ಯರನ್ನು ಆಯ್ಕೆ ಮಾಡಲು ನಡೆಯಲಿರುವ ಈ ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಸಮ್ಮತವಾಗಿ ನಡೆಸುವ ಸಲುವಾಗಿ ಆಯೋಗ, ೨ ಸಾವಿರದ ೧೦೦ ಚುನಾವಣಾ ವೀಕ್ಷಕರ ಸಶಕ್ತ ತಂಡವೊಂದನ್ನು ನಿಯೋಜಿಸಿದೆ. ಈ ಚುನಾವಣಾ ವೀಕ್ಷಕರು, ಹಲವು ಗುರುತರ ಜವಾಬ್ದಾರಿಗಳೊಂದಿಗೆ ಜಿಲ್ಲಾ, ಚುನಾವಣಾಧಿಕಾರಿಗಳು ಮತ್ತು ಮತಗಟ್ಟೆ ಅಧಿಕಾರಿಗಳ ಕಾರ್ಯ ನಿರ್ವಹಣೆಯ ಮೇಲೂ ಸಹ ನಿಕಟ ನಿಗಾ ಇಡಲಿದ್ದಾರೆ. ಚುನಾವಣಾ ಪ್ರಕ್ರಿಯೆ ಅವಧಿಯಲ್ಲಿ ಯಾವುದೇ ರೀತಿಯ ಪ್ರಚೋದನೆ, ಬೆದರಿಕೆ ಅಥವಾ ಒತ್ತಾಯದ ಪ್ರಕರಣಗಳನ್ನೂ ಈ ವೀಕ್ಷಕರು ಗಮನಿಸಲಿದ್ದಾರೆ. ಇದಲ್ಲದೇ, ಶಾಂತಿಯುತ ಮತದಾನಕ್ಕೆ ಅಗತ್ಯವಾದ ಭದ್ರತಾ ಪಡೆಗಳ ನಿಯೋಜನೆ ಹಾಗೂ ಅವುಗಳ ಸಾಗಾಟವೂ ಕೂಡ ಈ ವೀಕ್ಷಕರ ಮೇಲುಸ್ತುವಾರಿಯಲ್ಲಿ ನಡೆಯುವುದು. ಚುನಾವಣಾ ಕರ್ತವ್ಯಗಳಿಗೆ ನಿಯೋಜಿತಗಾರುವ ಸಿಬ್ಬಂದಿ ಮತ್ತು ಮತಯಂತ್ರಗಳ ರ್‍ಯಾಂಡಮೈಸೇಷನ್ ಪ್ರಕ್ರಿಯೆಯನ್ನೂ ಸಹ ಚುನಾವಣಾ ವೀಕ್ಷಕರು ಗಮನಿಸುತ್ತಾರೆ. ಈ ಎಲ್ಲಾ ಜವಾಬ್ದಾರಿಗಳ ನಿರ್ವಹಣೆಗಾಗಿ ವೀಕ್ಷಕರು ತಮ್ಮ ನಿಯೋಜಿತ ಸಂಸದೀಯ ಮತಕ್ಷೇತ್ರಗಳಲ್ಲಿ ಮೊಕ್ಕಾಂ ಹೂಡುತ್ತಾರೆ ಮತ್ತು ಅವರ ಎಲ್ಲ ಸಂಪರ್ಕ ವಿವರಗಳು, ವೆಬ್‌ಸೈಟ್‌ಗಳು ಹಾಗೂ ಮಾಧ್ಯಮ ಘಟಕಗಳೂ ಸೇರಿದಂತೆ ಹಲವು ವೇದಿಕೆಗಳಲ್ಲಿ ಲಭ್ಯವಿರುತ್ತವೆ.ತಮ್ಮ ವ್ಯಾಪ್ತಿಯ ಮತಕೇಂದ್ರಗಳಿಗೆ ಈ ವೀಕ್ಷಕರು ನಿಯಮಿತವಾಗಿ ಭೇಟಿ ನೀಡಲೂ ಸಹ ಆಯೋಗ ಅವರಿಗೆ ನಿರ್ದೇಶಿಸಿದೆ. ಇದರಿಂದ ಚುನಾವಣೆಯ ಅವಧಿಯಲ್ಲಿ ಮತಕೇಂದ್ರಗಳ ಮಟ್ಟದಲ್ಲಿ ನಡೆಯುವ ಯಾವುದೇ ವಿವಾದಗಳು ಅಥವಾ ಸವಾಲುಗಳ ನಿರ್ವಹಣೆಗೆ ನೆರವಾಗಲಿದೆ. ಚುನಾವಣಾ ಪ್ರಕ್ರಿಯೆಯನ್ನು ಸುಗಮಗೊಳಿಸುವ ಪ್ರಯತ್ನವಾಗಿ ಈ ಚುನಾವಣಾ ವೀಕ್ಷಕರು ತಮ್ಮ ನಿಯೋಜಿತ ಮತಕ್ಷೇತ್ರಗಳಲ್ಲಿ ಎದುರಾಗಬಹುದಾದ ಯಾವುದೇ ವಿವಾದಗಳ ಇತ್ಯರ್ಥಕ್ಕಾಗಿ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಮತ್ತು ಅಭ್ಯರ್ಥಿಗಳೊಂದಿಗೆ ಆಗಾಗ ಸಭೆಗಳನ್ನು ನಡೆಸುತ್ತಾರೆ.

**<><*<><>*><>**

ಲೋಕಸಭೆ ಚುನಾವಣೆ ಹಿನ್ನೆಲೆಯಲ್ಲಿ ಬಿಜೆಪಿ ತನ್ನ ೧೫ ಅಭ್ಯರ್ಥಿಗಳ ನಾಲ್ಕನೇ ಪಟ್ಟಿ ಬಿಡುಗಡೆ ಮಾಡಿದೆ. ಪುದುಚೇರಿ ಹಾಗೂ ತಮಿಳುನಾಡು ಲೋಕಸಭಾ ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನ ಘೋಷಿಸಲಾಗಿದೆ. ಈ ಮೊದಲು ೨೦೨೪ರ ಲೋಕಸಭಾ ಸಾರ್ವತ್ರಿಕ ಚುನಾವಣೆಗೆ ಬಿಜೆಪಿ ೨೬೭ ಅಭ್ಯರ್ಥಿಗಳ ಹೆಸರುಗಳನ್ನು ಬಿಡುಗಡೆ ಮಾಡಿತ್ತು.

<><*<><>*><>

ದೆಹಲಿ ಮುಖ್ಯಮಂತ್ರಿ ಅರವಿಂದ್ ಕ್ರೇಜಿವಾಲ್ ಅವರನ್ನು ಬಂಧಿಸಿರುವ ಹಿನ್ನೆಲೆಯಲ್ಲಿ, ಚುನಾವಣಾ ಆಯೋಗ ಮಧ್ಯಪ್ರವೇಶಿಸಬೇಕು ಎಂದು ಪ್ರತಿಪಕ್ಷಗಳು ಕೋರಿವೆ. ಸರ್ವ ಪ್ರತಿಪಕ್ಷಗಳ ನಿಯೋಗವೊಂದು ನವದೆಹಲಿಯಲ್ಲಿ ಚುನಾವಣಾ ಆಯೋಗವನ್ನು ಭೇಟಿ ಮಾಡಿ, ತನಿಖಾ ಸಂಸ್ಥೆಗಳನ್ನು ಪ್ರತಿಪಕ್ಷಗಳ ವಿರುದ್ಧ ದುರುಪಯೋಗ ಮಾಡಿಕೊಳ್ಳಲಾಗುತ್ತಿದೆ ಎಂದು ದೂರಿವೆ. ಸ್ವತಂತ್ರ ಭಾರತ ಇತಿಹಾಸದಲ್ಲಿ ಹಾಲಿ ಮುಖ್ಯಮಂತ್ರಿಯೊಬ್ಬರನ್ನು ಬಂಧಿಸಿರುವುದು ಇದೇ ಮೊದಲು ಎಂದು ಪ್ರತಿಪಕ್ಷಗಳು ಹೇಳಿವೆ. ಆಯೋಗದ ಸಭೆಯ ನಂತರ ಮಾಧ್ಯಮಗಳನ್ನುದ್ದೇಶಿಸಿ ಮಾತನಾಡಿದ ಹಿರಿಯ ಕಾಂಗ್ರೆಸ್ ನಾಯಕ ಅಭಿಷೇಕ್ ಮನುಸಿಂಘ್ವಿ, ಚುನಾವಣಾ ಪ್ರಕ್ರಿಯೆ ಹಾಗೂ ಪ್ರಜಾಪ್ರಭುತ್ವದ ನ್ಯಾಯಸಮ್ಮತತೆಗೆ ದಕ್ಕೆ ತರುವಂತೆ ವಿರೋಧ ಪಕ್ಷಗಳ ವಿರುದ್ಧ ಕೇಂದ್ರೀಯ ಸಂಸ್ಥೆಗಳನ್ನು ದುರಪಯೋಗಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದರು. ಕಾಂಗ್ರೆಸ್, ಟಿಎಂಸಿ, ಡಿಎಂಕೆ, ಎಡಪಕ್ಷಗಳು, ಸಮಾಜವಾದಿ ಪಕ್ಷ ಹಾಗೂ ಇತರ ಪ್ರತಿಪಕ್ಷಗಳ ನಾಯಕರು ನಿಯೋಗದಲ್ಲಿ ಭಾಗವಹಿಸಿದ್ದರು.

<><*<><>*><>

ಭೂತಾನ್ ದೊರೆ ಜಿಗ್ಮೆ ಖೇಸರ್ ನಾಮ್ಗ್ಯೆಲ್ ವಾಂಗ್‌ಚುಕ್ ಅವರು ಭೂತಾನ್‌ನ ಅತ್ಯುನ್ನತನಾಗರಿಕ ಪ್ರಶಸ್ತಿ ಆರ್ಡರ್ ಆಫ್ ದಿ ಡ್ರುಕ್ ಗಯಾಲ್ಪೋ ಅನ್ನು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಥಿಂಪುವಿನಲ್ಲಿ ಪ್ರದಾನ ಮಾಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಮೋದಿ, ಇಂದು ತಮ್ಮ ಜೀವನದಲ್ಲಿ ಅತ್ಯಂತ ಮಹತ್ವದ ದಿನ. ಪ್ರತಿಯೊಂದು ಪ್ರಶಸ್ತಿಯೂ ವಿಶೇಷ, ಆದರೆ, ಅನ್ಯ ದೇಶದಿಂದ ಪ್ರಶಸ್ತಿ ಸ್ವೀಕರಿಸಿದಾಗ ಎರಡೂ ದೇಶಗಳು ಸರಿಯಾದ ದಾರಿಯಲ್ಲಿ ಸಾಗುತ್ತಿವೆ ಎಂಬುದನ್ನು ತೋರಿಸುತ್ತದೆ ಎಂದರು. ಈ ಗೌರವ ತಮ್ಮ ವೈಯಕ್ತಿಕ ಸಾಧನೆಯಲ್ಲ, ಭಾರತ ಹಾಗೂ ಅದರ ೧೪೦ ಕೋಟಿ ಭಾರತೀಯರಿಗೆ ಸಂದ ಗೌರವವಾಗಿದ್ದು, ಎಲ್ಲಾ ಭಾರತೀಯರ ಪರವಾಗಿ ಪ್ರಶಸ್ತಿ ಸ್ವೀಕರಿಸಿದ್ದೇನೆ ಎಂದು ಪ್ರಶಸ್ತಿ ಪ್ರದಾನ ಮಾಡಿದಕ್ಕೆ ಕೃತಜ್ಞತೆ ವ್ಯಕ್ತಪಡಿಸಿದ್ದಾರೆ. ಪ್ರಧಾನಿ ಮೋದಿ ಅವರು ಥಿಂಪುವಿನ ತಾಶಿ ಚೋಡ್‌ಜಾಂಗ್ ಅರಮನೆಯಲ್ಲಿ ಭೂತಾನ್ ದೊರೆಯೊಂದಿಗೆ ಮಾತುಕತೆ ನಡೆಸಿದರು. ಇಬ್ಬರೂ ನಾಯಕರು ವಿಶೇಷ ಹಾಗೂ ವಿಶಿಷ್ಟವಾದ ಭಾರತ-ಭೂತಾನ್ ದೇಶಗಳ ಸ್ನೇಹಕ್ಕೆ ತಮ್ಮ ಬದ್ಧತೆಯನ್ನು ನವೀಕರಿಸಿದರು.

<><*<><>*><>

ಅಮೂಲ್ಯ ನೈಸರ್ಗಿಕ ಸಂಪನ್ಮೂಲವಾದ ನೀರಿನ ಮಹತ್ವ ಮತ್ತು ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ವಿಶ್ವ ಜಲ ದಿನವನ್ನು ಇಂದು ಆಚರಿಸಲಾಗುತ್ತಿದೆ. ದೈನಂದಿನ ಚಟುವಟಿಕೆಗಳಿಗೆ ಅತ್ಯಗತ್ಯವಾದ ಜೀವ ಜಲದ ಮೂಲ ಸೆಲೆಯಾದ ಅಂತರ್ಜಲ ಬತ್ತಿಹೋಗುತ್ತಿರುವುದು ಜಗತ್ತಿನೆಲ್ಲೆಡೆ ಪ್ರಸ್ತುತ ಆತಂಕಕ್ಕೆ ಕಾರಣವಾಗಿದ್ದು, ಅಂತರ್ಜಲ ಮಟ್ಟ ನಿರ್ವಹಣೆಗೆ ವಿಶೇಷ ಗಮನ ನೀಡಲಾಗುತ್ತಿದೆ. ಒಂದು ಅಂದಾಜಿನಂತೆ ವಿಶ್ವದಲ್ಲಿ ೨.೨ ಬಿಲಿಯನ್ ಜನರಿಗೆ ಶುದ್ಧ ಕುಡಿಯುವ ನೀರು ದೊರೆಯದಿರುವ ಹಿನ್ನೆಲೆಯಲ್ಲಿ ಎಲ್ಲರಿಗೂ ಶುದ್ಧ ಕುಡಿಯುವ ನೀರು ದೊರೆಯಬೇಕು ಎನ್ನುವುದು ಎಲ್ಲ ಸರ್ಕಾರಗಳ ಆದ್ಯತೆಯ ವಿಷಯವಾಗಿದೆ. ಜನಸಂಖ್ಯೆಯ ಹೆಚ್ಚಳದೊಂದಿಗೆ ಅತಿ ವೇಗವಾಗಿ ಬೆಳೆಯುತ್ತಿರುವ ನಗರಗಳಲ್ಲಿ ನೀರಿನ ಸಮಸ್ಯೆ ತೀವ್ರಗೊಳ್ಳುತ್ತಿದ್ದು, ಈ ಬಾರಿ ಶಾಂತಿಗಾಗಿ ಜೀವ ಜಲ ಎನ್ನುವ ಧ್ಯೇಯ ವಾಕ್ಯದೊಂದಿಗೆ ಈ ದಿನವನ್ನು ಆಚರಿಸಲಾಗುತ್ತಿದೆ.

ಪ್ರತಿ ವರ್ಷ ಮಾರ್ಚ್ ೨೨ನೇ ತಾರೀಖನ್ನು ವಿಶ್ವ ಜಲ ದಿನವನ್ನಾಗಿ ಆಚರಿಸಲು ೧೯೯೩ರಲ್ಲಿ ವಿಶ್ವ ಸಂಸ್ಥೆಯ ಮಹಾಸಭೆ ಅವಿರೋಧವಾಗಿ ತೀರ್ಮಾನಿಸಿತ್ತು. ಇದರ ಅಂಗವಾಗಿ ಜಲ ಸಂರಕ್ಷಣೆ ನೀರು ಕಲುಷಿತವಾಗದಂತೆ ರಕ್ಷಿಸುವುದು ಮತ್ತು ಜನ-ಜಾನುವಾರುಗಳ ಆರೋಗ್ಯ ಮತ್ತು ನೈರ್ಮಲ್ಯ ರಕ್ಷಣೆಯಲ್ಲಿ ನೀರಿನ ಮಹತ್ವದ ಬಗ್ಗೆ ಮಾಹಿತಿ ನೀಡುವ ಶೈಕ್ಷಣಿಕ ಕಾರ್ಯಾಗಾರಗಳು, ವಿಶೇಷ ಪ್ರಚಾರ ಆಂದೋಲನಗಳು, ಸಸಿಗಳನ್ನು ನೆಡುವಿಕೆ ಮೊದಲಾದ ಚಟುವಟಿಕೆ ಮೂಲಕ ಜನಜಾಗೃತಿ ಮೂಡಿಸಲಾಗುವುದು.

<><*<><>*><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಹೊಸದಾಗಿ ಅಭಿವೃದ್ಧಿಪಡಿಸಿರುವ ಮರುಬಳಕೆಯ ಬಾಹ್ಯಾಕಾಶ ನೌಕೆ ಪುಷ್ಪಕ್‌ನ ಪರೀಕ್ಷೆ ಇಂದು ಯಶಸ್ವಿಯಾಗಿದೆ. ಚಿತ್ರದುರ್ಗದ ಚಳ್ಳಕೆರೆಯಲ್ಲಿರುವ ಬಾಹ್ಯಾಕಾಶ ನೌಕೆ ಪರೀಕ್ಷಾ ಕೇಂದ್ರದಲ್ಲಿ ಈ ಪ್ರಾಯೋಗಿಕ ಪರೀಕ್ಷೆ ನಿಗದಿಯಾಗಿತ್ತು ಇಸ್ರೋ ಅಧ್ಯಕ್ಷ ಸೋಮನಾಥ್ ನೇತೃತ್ವದಲ್ಲಿ ಪರೀಕ್ಷೆ ನಡೆಯಿತು. ಉಡಾವಣಾ ವಾಹನ ಖಐಗಿ ಸ್ವಾಯತ್ತ ಮೋಡ್‌ನಲ್ಲಿ ನಿಖರವಾಗಿ ಇಳಿದಿದೆ. ಇಸ್ರೋ ಅಧ್ಯಕ್ಷ ಎಸ್ ಸೋಮನಾಥ್ ಬಾಹ್ಯಾಕಾಶ ನೌಕೆಯ ಕುಶಲತೆ, ಲ್ಯಾಂಡಿಂಗ್ ಮತ್ತು ಶಕ್ತಿಯ ನಿರ್ವಹಣೆಯನ್ನು ಸಂಪೂರ್ಣ ಸ್ವಾಯತ್ತ ಕ್ರಮದಲ್ಲಿ ದೋಷರಹಿತವಾಗಿ ಕಾರ್ಯಗತಗೊಳಿಸಿದ್ದಕ್ಕಾಗಿ ತಂಡವನ್ನು ಅಭಿನಂದಿಸಿದ್ದಾರೆ. ಪುಷ್ಪಕ್ ಯಶಸ್ವಿ ಪರೀಕ್ಷೆಯೊಂದಿಗೆ ಮತ್ತೊಂದು ಮಹೋನ್ನತ ಸಾಧನೆ ಮಾಡಿರುವ ಇಸ್ರೋದ ವಿಜ್ಞಾನಿಗಳನ್ನು ಮಾಹಿತಿ ಮತ್ತು ಪ್ರಸಾರ ಖಾತೆ ಸಚಿವ ಅನುರಾಗ್ ಸಿಂಗ್ ಠಾಕೂರ್ ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅವರು, ನಮ್ಮ ವಿಜ್ಞಾನಿಗಳ ನಿರಂತರ ಸಮರ್ಪಣೆ ಮತ್ತು ಆವಿಷ್ಕಾರ ಶ್ಲಾಘನೀಯವಾಗಿದೆ ಮತ್ತು ಬಾಹ್ಯಾಕಾಶ ಪರಿಶೋಧನೆಯಲ್ಲಿ ದೇಶ ಹೊಸ ಎತ್ತರವನ್ನು ತಲುಪಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

<><*<><>*><>

ಕರ್ನಾಟಕದಲ್ಲಿ ರಾಜ್ಯ ಪಠ್ಯಕ್ರಮ ಅನುಸರಿಸುತ್ತಿರುವ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಶಿಕ್ಷಣ ಸಂಸ್ಥೆಗಳಲ್ಲಿ ೫, ೮, ೯ ಹಾಗೂ ೧೧ನೇ ತರಗತಿಗಳಿಗೆ ಬೋರ್ಡ್ ಮಟ್ಟದ ಮೌಲ್ಯಾಂಕನ ಪರೀಕ್ಷೆ ನಡೆಸಲು ರಾಜ್ಯ ಹೈಕೋರ್ಟ್ ವಿಭಾಗೀಯ ಪೀಠ ಅನುಮತಿ ನೀಡಿ ಆದೇಶಿಸಿದೆ. ಬೋರ್ಡ್ ಮಟ್ಟದ ಪರೀಕ್ಷೆಗಳನ್ನು ನಡೆಸುವ ಸಂಬಂಧ ರಾಜ್ಯ ಸರ್ಕಾರ ಹೊರಡಿಸಿದ್ದ ಸುತ್ತೋಲೆಗಳನ್ನು ರದ್ದುಪಡಿಸಿದ್ದ ಏಕ ಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಸಲ್ಲಿಸಿದ್ದ ಮೇಲ್ಮನವಿ ವಿಚಾರಣೆ ನಡೆಸಿ ಕಾಯ್ದಿರಿಸಿದ್ದ ಆದೇಶವನ್ನು ಇಂದು ಪ್ರಕಟಿಸಿದೆ. ರಾಜ್ಯ ಸರ್ಕಾರ ಬೋರ್ಡ್ ಪರೀಕ್ಷೆ ನಡೆಸಬಹುದು. ಪರೀಕ್ಷೆ ಪ್ರಕ್ರಿಯೆ ಸ್ಥಗಿತಗೊಂಡ ಹಂತದಿಂದಲೇ ಇದನ್ನು ಮುಂದುವರಿಸಬೇಕು. ಮುಂದಿನ ಶೈಕ್ಷಣಿಕ ವರ್ಷದಲ್ಲಿ ಬೋರ್ಡ್ ಪರೀಕ್ಷೆ ನಡೆಸಲು ಸಂಬಂಧಪಟ್ಟವರೊಂದಿಗೆ ಸಮಾಲೋಚಿಸಬೇಕು ಎಂದು ಸರ್ಕಾರಕ್ಕೆ ಪೀಠ ಸೂಚಿಸಿದೆ.

<><*<><>*><>

ಮಧ್ಯಪ್ರದೇಶದಲ್ಲಿ ಲೋಕಾಯುಕ್ತ ನೇಮಕಕ್ಕೆ ಸಂಬಂಧಿಸಿದಂತೆ ಪ್ರತಿಪಕ್ಷ ನಾಯಕ ಮತ್ತು ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಅವರೊಂದಿಗ ಸಮಾಲೋಚಿಸುವ ವಿಧಾನ ಮತ್ತು ಕಾರ್ಯವಿಧಾನ ಪರಿಶೀಲಿಸಲು ನಿರ್ಧರಿಸಿರುವ ಸುಪ್ರೀಂಕೋರ್ಟ್, ಎರಡು ವಾರದೊಳಗೆ ಉತ್ತರ ಸಲ್ಲಿಸುವಂತೆ ರಾಜ್ಯ ಸರ್ಕಾರಕ್ಕೆ ನೋಟಿಸ್ ನೀಡಿದೆ. ಮಧ್ಯಪ್ರದೇಶದಲ್ಲಿ ಪ್ರತಿಪಕ್ಷ ನಾಯಕ ಉಮಂಗ್ ಸಿಂಘರ್ ಅವರು ಸಲ್ಲಿಸಿದ ರಿಟ್ ಅರ್ಜಿ ವಿಚಾರಣೆ ನಡೆಸಿದ ಮುಖ್ಯ ನ್ಯಾಯಮೂರ್ತಿ ಡಿವೈ ಚಂದ್ರಚೂಡ್ ಮತ್ತು ನ್ಯಾಯಮೂರ್ತಿ ಜೆಬಿ ಪರ್ದಿವಾಲಾ ಮತ್ತು ಮನೋಜ್ ಮಿಶ್ರಾ ಅವರ ಪೀಠ, "ನಾವು ರಾಷ್ಟ್ರವ್ಯಾಪಿ ಪರಿಣಾಮವನ್ನು ಗಮನದಲ್ಲಿಟ್ಟುಕೊಂಡು ಈ ವಿಷಯ ವಿಚಾರಣೆ ಮಾಡುತ್ತೇವೆ" ಎಂದು ಹೇಳಿದೆ.

ಲೋಕಾಯುಕ್ತ ನೇಮಕಕ್ಕೆ ಸಂಬಂಧಿಸಿದ ಮುಖ್ಯ ದಾಖಲೆಗಳನ್ನು ಎರಡು ವಾರಗಳಲ್ಲಿ ತನ್ನ ಮುಂದೆ ಹಾಜರುಪಡಿಸುವಂತೆ ಪೀಠವು ತನ್ನ ಆದೇಶದಲ್ಲಿ ರಾಜ್ಯ ಸರ್ಕಾರಕ್ಕೆ ಸೂಚಿಸಿದೆ. ಈ ತಿಂಗಳು ನ್ಯಾಯಮೂರ್ತಿ ಸತ್ಯೇಂದ್ರ ಕುಮಾರ್ ಸಿಂಗ್ ಅವರನ್ನು ಲೋಕಾಯುಕ್ತರನ್ನಾಗಿ ನೇಮಕ ಮಾಡುವಲ್ಲಿ ಸರಿಯಾದ ಸಮಾಲೋಚನೆ ನಡೆದಿಲ್ಲ ಎಂದು ಅರ್ಜಿದಾರರು ಆರೋಪಿಸಿದ್ದಾರೆ. ಪ್ರತಿಪಕ್ಷ ನಾಯಕರಾಗಿರುವ ತಾವು ಲೋಕಾಯುಕ್ತರ ಆಯ್ಕೆ ಸಮಿತಿಯ ಸದಸ್ಯರಲ್ಲಿ ಒಬ್ಬರು. ಅವರಿಂದ ಯಾವುದೇ ಅಭಿಪ್ರಾಯ ತೆಗೆದುಕೊಳ್ಳಲಾಗಿಲ್ಲ. ಮಧ್ಯಪ್ರದೇಶ ಲೋಕಾಯುಕ್ತ ಮತ್ತು ಉಪ - ಲೋಕಾಯುಕ್ತ ಕಾಯಿದೆ ೧೯೮೧ ರ ನಿಬಂಧನೆಗಳ ಅಡಿ ಸೂಕ್ತ ಸಮಾಲೋಚನೆಯಿಲ್ಲದೇ ಲೋಕಾಯುಕ್ತರ ನೇಮಕಾತಿ ಮಾಡಲಾಗಿದೆ ಎಂದು ಸಿಂಘಾರ್ ತಮ್ಮ ಅರ್ಜಿಯಲ್ಲಿ ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಪರವಾಗಿ ಪೀಠದ ಮುಂದೆ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು, ಲೋಕಾಯುಕ್ತ ನೇಮಕಕ್ಕೆ ಸಂಬಂಧಿಸಿದಂತೆ ಹಲವು ನಿರ್ಧಾರಗಳಿವೆ. ಅವೆಲ್ಲವನ್ನೂ ಆ ಪ್ರಕರಣಗಳ ತನಿಖೆಯ ನಂತರ ಹೈಕೋರ್ಟ್ ನೀಡಿತು. ಸಮಾಲೋಚನೆಯ ಉದ್ದೇಶಕ್ಕಾಗಿ ವಿರೋಧ ಪಕ್ಷದ ನಾಯಕರ ಮುಂದೆ ಒಬ್ಬರ ಹೆಸರನ್ನು ಮಾತ್ರ ಇರಿಸಲಾಗಿದೆ ಎಂಬ ವಾದ ತಳ್ಳಿಹಾಕಿದರು.

<><*<><>*><>

ಇಂಡಿಯನ್ ಪ್ರೀಮಿಯರ್ ಲೀಗ್ ಟಿ-೨೦ ಕ್ರಿಕೆಟ್ ಟೂರ್ನಿಯ ೧೭ನೇ ಆವೃತ್ತಿಗೆ ಚೆನ್ನೈನ ಎಂ.ಎ. ಚಿದಂಬರಂ ಕ್ರೀಡಾಂಗಣದಲ್ಲಿ ಇಂದು ಸಂಜೆ ಚಾಲನೆ ಲಭಿಸಿದೆ. ಪಂದ್ಯಕ್ಕೂ ಮುನ್ನ ಚೆಪಾಕ್ ಮೈದಾನದಲ್ಲಿ ಬಾಲಿವುಡ್ ತಾರೆಯರಿಂದ ಸಂಗೀತ, ನೃತ್ಯ ಸೇರಿದಂತೆ ಹಲವು ಕಾರ್ಯಕ್ರಮಗಳು ನಡೆದವು. ಆರಂಭಿಕ ಪಂದ್ಯದಲ್ಲಿಂದು ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಬೆಂಗಳೂರು ರಾಯಲ್ ಚಾಲೆಂಜರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೮ ಗಂಟೆಗೆ ಆರಂಭವಾಗಲಿದೆ. ಮಹೇಂದ್ರ ಸಿಂಗ್ ಧೋನಿ ಚೆನ್ನೈ ಸೂಪರ್ ಕಿಂಗ್ಸ್ ತಂಡದ ನಾಯಕತ್ವದಿಂದ ನಿವೃತ್ತರಾಗಿದ್ದು, ಋತುರಾಜ್ ಗಾಯಕ್ವಾಡ್ ತಂಡಕ್ಕೆ ಹೊಸ ನಾಯಕರಾಗಿ ಆಯ್ಕೆಯಾಗಿದ್ದಾರೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**